**Akashvani : Bangalore**
**Regional Bulletin In Kannada**
**30.09.2025 / 2.30 pm**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**30.09.2025 / 2.30 pm**

<u>ಮುಖ್ಯಾಂಶಗಳು</u>

೧. ಕಲ್ಯಾಣ ಕರ್ನಾಟಕದಲ್ಲಿ ಪ್ರವಾಹ; ಮುಖ್ಯಮಂತ್ರಿ ಸಿದ್ದರಾಮಯ್ಯ ವೈಮಾನಿಕ ಸಮೀಕ್ಷೆ

೨. ಪ್ರವಾಹ ಸಂತ್ರಸ್ತರಿಗೆ ೫೦ ಸಾವಿರ ತುರ್ತು ಪರಿಹಾರ ಘೋಷಿಸುವಂತೆ ಬಿಜೆಪಿ ಆಗ್ರಹ

೩. ಬೆಂಗಳೂರಿನಲ್ಲಿ ಅಕ್ಟೋಬರ್ ೩ರಿಂದ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸಮೀಕ್ಷೆ - ಜಿಬಿಎ ಆಯುಕ್ತ ಮಹೇಶ್ವರ ರಾವ್ ಸ್ಪಷ್ಟನೆ

೪. ಶೃಂಗೇರಿ ಶಾಸಕ ಟಿ.ಡಿ.ರಾಜೇಗೌಡ ನಿವಾಸದ ಮೇಲೆ ಲೋಕಾಯುಕ್ತ ದಾಳಿ

೫. ಹೈಕೋರ್ಟ್ ಹೆಚ್ಚುವರಿ ನ್ಯಾಯಾಧೀಶರಾಗಿ ಮೂವರು ಅಧಿಕಾರ ಸ್ವೀಕಾರ

*************

ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಇಂದು ಕಲ್ಯಾಣ ಕರ್ನಾಟಕದ ಪ್ರವಾಹ ಪೀಡಿತ ಜಿಲ್ಲೆಗಳಾದ ವಿಜಯಪುರ, ಯಾದಗಿರಿ, ಬೀದರ್ ಹಾಗೂ ಕಲಬುರಗಿ ಜಿಲ್ಲೆಗಳಲ್ಲಿ ವೈಮಾನಿಕ ಸಮೀಕ್ಷೆ ನಡೆಸುತ್ತಿದ್ದಾರೆ. ಇದಕ್ಕೂ ಮೊದಲು ಕಲಬುರಗಿ ವಿಮಾನ ನಿಲ್ದಾಣಕ್ಕೆ ಆಗಮಿಸಿದ ಅವರು, ಪ್ರವಾಹದಿಂದಾಗಿ ಭೀಮಾ ತೀರದ ಪ್ರದೇಶಗಳಲ್ಲಿ ಉಂಟಾಗಿರುವ ಹಾನಿ ಬಗ್ಗೆ ವಿಮಾನ ನಿಲ್ದಾಣದಲ್ಲೇ ಪ್ರಾಥಮಿಕ ಸಭೆ ನಡೆಸಿ ಮಾಹಿತಿ ಪಡೆದರು. ಕಲಬುರಗಿ, ಬೀದರ್, ಯಾದಗಿರಿ ಹಾಗು ವಿಜಯಪುರ ಜಿಲ್ಲಾಧಿಕಾರಿಗಳು ಮತ್ತು ಉಸ್ತುವಾರಿ ಕಾರ್ಯದರ್ಶಿಗಳು ಸಭೆಯಲ್ಲಿ ಪ್ರವಾಹ ಪರಿಸ್ಥಿತಿ ಕುರಿಂತೆ ವಿವರಗಳನ್ನು ನೀಡಿದರು. ಬಳಿಕ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಚಿವರಾದ ಎಂ.ಬಿ.ಪಾಟೀಲ್, ಕೃಷ್ಣ ಬೈರೇಗೌಡ ಮತ್ತು ಪ್ರಿಯಾಂಕ್ ಖರ್ಗೆ ಜೊತೆಯಲ್ಲಿ ಮೊದಲ ಸುತ್ತಿನ ವೈಮಾನಿಕ ಸಮೀಕ್ಷೆ ನಡೆಸಿದರು. ಇದಾದ ಬಳಿಕ ಬೀದರ್ ಜಿಲ್ಲಾ ವ್ಯಾಪ್ತಿಯಲ್ಲಿನ ಬೆಳೆ ಹಾನಿ ಕುರಿತು ಎರಡನೇ ಸುತ್ತಿನ ವೈಮಾನಿಕ ಸಮೀಕ್ಷೆಯನ್ನು ನಡೆಸಲಿದ್ದಾರೆ.

*************

ಮಹಾರಾಷ್ಟ್ರದ ಭೀಮಾ ಕಣಿವೆಯ ಜಲಾಶಯಗಳಿಂದ ನೀರು ಬಿಡುಗಡೆ ಪ್ರಮಾಣ ಕೊಂಚ ತಗ್ಗಿದ್ದು, ಭೀಮಾ ನದಿ ಪಾತ್ರದಲ್ಲಿನ ಪ್ರವಾಹ ಪರಿಸ್ಥಿತಿ ನಿಯಂತ್ರಣಕ್ಕೆ ಬಂದಿದೆ. ಯಾದಗಿರಿ ಜಿಲ್ಲೆಯ ಶಹಾಪುರ, ಯಾದಗಿರಿ ಹಾಗೂ ವಡಗೇರಾ ತಾಲ್ಲೂಕುಗಳ ೭ ಗ್ರಾಮಗಳು ಪ್ರವಾಹದಲ್ಲಿ ಮುಳುಗಡೆಯಾಗಿದೆ. ಪ್ರವಾಹದ ನೀರು ಇಳಿಮುಖ ಆಗುತ್ತಿದ್ದರೂ ಜನರಲ್ಲಿ ಹಾನಿ ಹಾಗೂ ಸಾಂಕ್ರಾಮಿಕ ರೋಗ ಭೀತಿ ಎದುರಾಗಿದೆ. ನದಿ ಪಾತ್ರದ ೩೫ ಗ್ರಾಮಗಳ ಜನ ಜಾನುವಾರುಗಳ ಸುರಕ್ಷತೆಗೆ ಮುಂಜಾಗ್ರತವಾಗಿ ಈಗಲೂ ನಿಗಾ ಇರಿಸಲಾಗಿದೆ.

*************

ಪ್ರವಾಹ ಸಂತ್ರಸ್ಥರಿಗೆ ಶೀಘ್ರವೇ ಪರಿಹಾರ ಘೋಷಿಸುವಂತೆ ಪ್ರತಿಪಕ್ಷ ನಾಯಕ ಆರ್. ಅಶೋಕ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಬೆಳೆಹಾನಿ, ಆಸ್ತಿ ನಷ್ಟ ಮತ್ತು ಜಾನುವಾರುಗಳ ಮೇಲೆ ಉಂಟಾದ ಪರಿಣಾಮಗಳ ಬಗ್ಗೆ ಸಮಗ್ರ ಸಮೀಕ್ಷೆ ನಡೆಸಬೇಕು ಎಂದು ಆಗ್ರಹಿಸಿದ್ದಾರೆ. ಪ್ರತೀ ಕುಟುಂಬಕ್ಕೆ ೫೦ ಸಾವಿರ ರೂಪಾಯಿ ತುರ್ತು ಪರಿಹಾರ ಘೋಷಿಸುವಂತೆ ಒತ್ತಾಯಿಸಿದ್ದಾರೆ. ಕಲ್ಯಾಣ ಕರ್ನಾಟಕ್ಕೆ ವಿಶೇಷ ಪ್ಯಾಕೇಜ್ ನೀಡುವಂತೆ ಹಾಗೂ ಪರಿಹಾರ ವಿತರಣೆಯಲ್ಲಿ ಪಾರದರ್ಶಕತೆ ಕಾಪಾಡುವಂತೆ ಒತ್ತಾಯಿಸಿದ್ದಾರೆ. ಪ್ರವಾಹ ಇಳಿದ ಮೇಲೆ ಸಾಂಕ್ರಾಮಿಕ ರೋಗಗಳು ಹರಡುವ ಭೀತಿ ಹೆಚ್ಚಾಗಿದ್ದು, ಆರೋಗ್ಯ ಇಲಾಖೆ ಎಚ್ಚೆತ್ತುಕೊಂಡು ಕಾರ್ಯ ಪ್ರವೃತ್ತರಾಗುವಂತೆ ಸಲಹೆ ನೀಡಿದ್ದಾರೆ.

*************

ಅತಿವೃಷ್ಟಿ ಹಾಗೂ ನೆರೆಯಿಂದ ತತ್ತರಿಸಿರುವ ಉತ್ತರ ಕರ್ನಾಟಕ ಭಾಗಕ್ಕೆ ಕೇಂದ್ರ ಸರ್ಕಾರದಿಂದ ವಿಶೇಷ ಪ್ಯಾಕೇಜ್ ಘೋಷಣೆ ಮಾಡುವಂತೆ ಶಾಸಕ ಶರಣಗೌಡ ಕಂದಕೂರ್ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರಿಗೆ ಪತ್ರ ಬರೆದಿದ್ದಾರೆ. ಕೇಂದ್ರ ಸಚಿವರಾದ ತಾವು ನೆರೆ ಪೀಡಿತ ಪ್ರದೇಶಕ್ಕೆ ವಿಶೇಷ ಪ್ಯಾಕೇಜ್ ಘೋಷಣೆ ಮಾಡಬೇಕು ಎಂದು ಕೋರಿದ್ದಾರೆ. ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಿ, ನೆರೆಪೀಡಿತ ಪ್ರದೇಶಗಳಲ್ಲಿ ವೈಮಾನಿಕ ಸಮೀಕ್ಷೆ ಹಾಗೂ ಸೂಕ್ತ ಪರಿಹಾರ-ನೆರವು ನೀಡುವಂತೆ ಮನವಿ ಮಾಡಿದ್ದಾರೆ.

*************

ಬೆಂಗಳೂರಿನಲ್ಲಿ ಅಕ್ಟೋಬರ್ ೩ ಇಲ್ಲವೇ ೪ರಿಂದ ಸಾಮಾಜಿಕ ಆರ್ಥಿಕ, ಶೈಕ್ಷಣಿಕ ಸಮೀಕ್ಷೆ ನಡೆಸಲಾಗುವುದು ಎಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿವಿಧ ಇಲಾಖೆಯ ಸಹಾಯ ಪಡೆದು ಸಮೀಕ್ಷೆ ನಡೆಸಲು ತೀರ್ಮಾನಿಸಲಾಗಿದೆ. ೧೭ ಸಾವಿರ ಮಂದಿಯನ್ನು ಸಮೀಕ್ಷೆಗೆ ಬಳಸಲಾಗುತ್ತಿದೆ. ಒಂದು ವಾರ್ಡ್‌ನಲ್ಲಿ ೨೦ರಿಂದ ೩೦ ಮಂದಿ ಸಮೀಕ್ಷೆ ಕೈಗೊಳ್ಳಲಿದ್ದಾರೆ. ೧೫ ದಿನದೊಳಗೆ ಸಮೀಕ್ಷೆ ಮುಗಿಸುವಂತೆ ಗಡುವು ವಿಧಿಸಲಾಗಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ಬೆಂಗಳೂರು ನಗರಾದ್ಯಂತ ರಸ್ತೆ ಗುಂಡಿಗಳನ್ನು ಮುಚ್ಚುವ ಕಾರ್ಯ ಪ್ರಗತಿಯಲ್ಲಿದೆ ಎಂದು ಅವರು ತಿಳಿಸಿದ್ದಾರೆ.

*************

ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ಕ್ಷೇತ್ರದ ಶಾಸಕ ಟಿ.ಡಿ ರಾಜೇಗೌಡ ಅವರ ನಿವಾಸದ ಮೇಲೆ ಲೋಕಾಯುಕ್ತ ಪೋಲೀಸರು ಇಂದು ದಾಳಿ ನಡೆಸಿದ್ದಾರೆ. ಬಾಳೆಹೊನ್ನೂರು ಸಮೀಪದ ಬಾಸಪುರ ಗ್ರಾಮದಲ್ಲಿರುವ ತೋಟದ ಮನೆ ಕಚೇರಿಗಳ ಮೇಲೆ ದಾಳಿ ನಡೆಸಿರುವ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ. ಇತ್ತೀಚೆಗೆ ಶಾಸಕ ರಾಜೇಗೌಡ ಹಾಗೂ ಅವರ ಕುಟುಂಬದ ಮೇಲೆ ವ್ಯಕ್ತಿಯೊಬ್ಬರು ಭ್ರಷ್ಟಚಾರದ ಆರೋಪ ಮಾಡಿ ಲೋಕಾಯುಕ್ತ ಪೊಲೀಸ್ ಠಾಣೆ ಹಾಗೂ ಬೆಂಗಳೂರಿನ ಜನಪ್ರತಿನಿಧಿಗಳ ನ್ಯಾಯಾಲಯದಲ್ಲಿ ದೂರು ನೀಡಿದ್ದರು. ದೂರಿನ ಬೆನ್ನಲ್ಲೇ ನ್ಯಾಯಾಲಯದ ಸೂಚನೆಯಂತೆ ಲೋಕಾಯುಕ್ತ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

*************

ಕರ್ನಾಟಕ ಉಚ್ಚ ನ್ಯಾಯಾಲಯದ ಹೆಚ್ಚುವರಿ ನ್ಯಾಯಮೂರ್ತಿಗಳಾಗಿ ಗೀತಾ ಕಡಬ ಭರತರಾಜ ಶೆಟ್ಟಿ, ಬೋರ್ಕಟ್ಟೆ ಮುರಳೀಧರ ಪೈ ಮತ್ತು ತ್ಯಾಗರಾಜ ನಾರಾಯಣ ಇನವಳ್ಳಿ ಅವರು ಇಂದು ಪ್ರಮಾಣವಚನ ಸ್ವೀಕರಿಸಿದರು. ಅವರಿಗೆ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಜಸ್ಟಿಸ್ ಕುರುಬರಹಳ್ಳಿ ವೆಂಕಟರಾಮರೆಡ್ಡಿ ಅರವಿಂದ್ ಪ್ರಮಾಣ ವಚನ ಬೋಧಿಸಿದರು.

*************

ಮೈಸೂರನಲ್ಲಿ ದಸರಾ ಹಬ್ಬ ಕಳೆಗಟ್ಟಿದೆ. ಚಾಮುಂಡಿಬೆಟ್ಟ ಆವರಣದಲ್ಲಿ ದಸರಾ ಮಹೋತ್ಸವ ಅಂಗವಾಗಿ ಆಯೋಜಿಸಿದ್ದ ಯೋಗ ಚಾರಣ ಮತ್ತು ಯೋಗ ನಮಸ್ಕಾರ ಕಾರ್ಯಕ್ರಮವನ್ನು ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಶಾಸಕ ಜಿ.ಟಿ.ದೇವೆಗೌಡ ಉದ್ಘಾಟಿಸಿದರು. ಭಾರತದಲ್ಲಿ ಹುಟ್ಟಿರುವ ಯೋಗವು ಪ್ರಧಾನಮಂತ್ರಿ ನರೇಂದ್ರ ಮೋದಿಯವರಿಂದ ವಿಶ್ವ ಮನ್ನಣೆ ಪಡೆದುಕೊಂಡಿದೆ. ಯೋಗ ಮಾಡುವುದರಿಂದ ರಕ್ತ ಪರಿಚಲನವಾಗಿ, ಮನಸ್ಸು ಮತ್ತು ದೇಹ ಆರೋಗ್ಯದಿಂದಿರಲು ಸಹಕಾರಿಯಾಗುತ್ತದೆ ಎಂದು ತಿಳಿಸಿದರು.

*************

ಮಂಡ್ಯ ನಗರದ ಶಂಕರಪುರ ಪ್ರಾಥಮಿಕ ಆರೋಗ್ಯ ಕೇಂದ್ರದ ವ್ಯಾಪ್ತಿಯ ಕ್ಷಯರೋಗಿಗಳಿಗೆ ಸ್ವಸ್ಥ ನಾರಿ ಸಶಕ್ತ ಪರಿವಾರ ಅಭಿಯಾನ ಕಾರ್ಯಕ್ರಮದಡಿಯಲ್ಲಿ ಉಚಿತವಾಗಿ ಫುಡ್ ಕಿಟ್ ಗಳನ್ನು ವಿತರಿಸಲಾಯಿತು. ಮಂಡ್ಯ ಜಿಲ್ಲಾ ಕ್ಷಯ ರೋಗ ನಿರ್ಮೂಲನಾಧಿಕಾರಿ ಡಾ.ಆಶಾಲತಾ ಉದ್ಘಾಟಿಸಿ ಕ್ಷಯರೋಗದ ಲಕ್ಷಣಗಳ ಬಗ್ಗೆ ತಪಾಸಣೆ ಹಾಗೂ ಚಿಕಿತ್ಸೆ ಪಡೆಯುವುದರ ಮೂಲಕ ಸಂಪೂರ್ಣವಾಗಿ ಮಾಹಿತಿ ನೀಡಿ ಕ್ಷಯರೋಗ ನಿರ್ಮೂಲನೆ ಮಾಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ತಿಳಿಸಿದ್ದಾರೆ.

*************

ನಗರ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರಿಗೆ ಇಲಾಖೆಯಿಂದ ದೊರೆಯುವ ಎಲ್ಲಾ ರೀತಿಯ ಸೌಲಭ್ಯಗಳನ್ನು ಒದಗಿಸುವಂತೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಸೂಚನೆ ನೀಡಿದ್ದಾರೆ. ಕಾರವಾರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ, ಸಫಾಯಿ ಕರ್ಮಚಾರಿಗಳ ಜಿಲ್ಲಾ ಮಟ್ಟದ ಜಾಗೃತ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಎಲ್ಲಾ ಪೌರ ಕರ್ಮಚಾರಿಗಳಿಗೆ ನಿಗದಿತ ಸಮಯಕ್ಕೆ ಸರಿಯಾಗಿ ಕಾರ್ಮಿಕ ಇಲಾಖೆಯಿಂದ ನಿಗದಿಪಡಿಸಿರುವ ವೇತನ ನೀಡಬೇಕು ಎಂದು ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ಪದ್ದತಿ ಕಂಡು ಬಾರದಂತೆ ಎಚ್ಚರವಹಿಸಬೇಕು. ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಡ್ಡಾಯವಾಗಿ ಯಂತ್ರಗಳ ಮೂಲಕವೇ ಶೌಚಗುಂಡಿಗಳ ಸ್ವಚ್ಚತೆ ಮಾಡಿಸಬೇಕು ಎಂದು ಸೂಚಿಸಿದ್ದಾರೆ.

*************

ಸಾಮಾಜಿಕ ಹಾಗೂ ಶೈಕ್ಷಣಿಕ ಸಮೀಕ್ಷೆಗೆ ತಮ್ಮ ವಿರೋಧವಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ. ಕಲಬುರಗಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಮೀಕ್ಷೆಯಲ್ಲಿನ ಸರ್ಕಾರದ ಪ್ರಾಮಾಣಿಕ ಕಳಕಳಿ ಜನರಿಗೆ ಕಾಣುತ್ತಿಲ್ಲ ಎಂದು ಹೇಳಿದ್ದಾರೆ. ಸರ್ಕಾರ ಮತ್ತು ಕಾಂಗ್ರೆಸ್ ಹೈಕಮಾಂಡ್ ಸಮೀಕ್ಷೆ ವಿಷಯದಲ್ಲಿ ಗೊಂದಲ ಮೂಡಿಸುತ್ತಿದೆ ಎಂದು ಸಂಸದ ಗೋವಿಂದ ಕಾರಜೋಳ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾವುದೇ ವ್ಯಕ್ತಿ ಧರ್ಮಾಂತರ ಆದರೆ, ಧರ್ಮಾಂತರ ಆದ ದಿನದಿಂದ ಅವನ ಪೂರ್ವಾಶ್ರಮದ ಹಂಗು ಇರುವುದಿಲ್ಲ ಎಂದು ತಿಳಿಸಿದ್ದಾರೆ. ಕಾಂತರಾಜು ವರದಿಗೆ ೧೮೦ ಕೋಟಿ ರೂಪಾಯಿ ಖರ್ಚು ಮಾಡಲಾಗಿದ್ದು, ಆ ವರದಿಯನ್ನು ಕಸದ ಬುಟ್ಟಿಗೆ ಎಸೆಯಲಾಗಿದೆ ಎಂದು ದೂರಿದ್ದಾರೆ.

*************

ದಸರಾ ಮಹೋತ್ಸವದ ಪ್ರಯುಕ್ತ ಹೆಚ್ಚಿನ ಜನದಟ್ಟಣೆ ಇರುವ ಕಾರಣ ನೈರುತ್ಯ ರೈಲ್ವೇ ಹೊಸ ಕೊಡುಗೆ ನೀಡಿದೆ. ಬೆಂಗಳೂರು, ಮಂಗಳೂರು ಮತ್ತು ಎರ್ನಾಕುಲಂಗಳ ನಡುವೆ ವಿಶೇಷ ರೈಲುಗಳ ಸೇವೆ ಒದಗಿಸುತ್ತಿದೆ. ೦೬೨೫೭ ಸಂಖ್ಯೆಯ ರೈಲು ಇಂದು ರಾತ್ರಿ ೧೧.೫೫ ಕ್ಕೆ ಯಶವಂತಪುರದಿಂದ ಹೊರಟು ನಾಳೆ ಮಂಗಳೂರಿನ ಜಂಕ್ಷನ್ ತಲುಪಲಿದೆ. ಅಕ್ಟೋಬರ್ ೧ ರಂದು ೦೬೨೫೮ ಸಂಖ್ಯೆಯ ರೈಲು ಮಧ್ಯಾಹ್ನ ೨.೩೫ ಕ್ಕೆ ಹೊರಟು ಅಂದಿನ ರಾತ್ರಿ ೧೧.೩೦ ರ ಸುಮಾರಿಗೆ ಯಶವಂತಪುರ ತಲುಪಲಿದೆ. ಈ ರೈಲುಗಳು ಕುಣಿಗಲ್, ಚನ್ನರಾಯಪಟ್ಟಣ, ಹಾಸನ, ಸಕಲೇಶಪುರ, ಸುಬ್ರಹ್ಮಣ್ಯ ರಸ್ತೆ, ಕಬಕಪುತ್ತೂರು ಮತ್ತು ಬಂಟ್ವಾಳದಲ್ಲಿ ನಿಲುಗಡೆಗೊಳ್ಳಲಿವೆ. ೦೬೧೪೭ ಸಂಖ್ಯೆಯ ರೈಲು ಅಕ್ಟೋಬರ್ ೫ರ ಸಂಜೆ ೪.೨೦ಕ್ಕೆ ಎರ್ನಾಕುಲಂನಿಂದ ಹೊರಟು ಮರುದಿನ ಬೆಳಿಗ್ಗೆ ಬೆಂಗಳೂರನ್ನು ತಲುಪಲಿದೆ.

*************